## 2. ಆನ್‌ಲೈನ್ ಅಬಾಧಿತ

ರಾಜ್ಯದಲ್ಲಿ ಆನ್‌ಲೈನ್ ಶಿಕ್ಷಣಕ್ಕೆ ಹೈಕೋರ್ಟ್‌ನಿಂದ ಹಸಿರು ನಿಶಾನೆ ಸಿಕ್ಕಿದೆ. ಇದೇ ವೇಳೆ ಮನಬಂದಂತೆ ಆನ್‌ಲೈನ್ ಪಾಠ ಮಾಡುವ ಖಾಸಗಿ ಶಾಲೆಗಳಿಗೆ ಷರತ್ತುಗಳ ಮೂಲಕ ಕಡಿವಾಣವನ್ನು ಹಾಕಲಾಗಿದೆ.

ಈ ಹಿಂದೆ ರಾಜ್ಯದಲ್ಲಿ ಎಲ್‌ಕೆಜಿಯಿಂದ 5ನೇ ತರಗತಿವರೆಗೆ ಆನ್‌ಲೈನ್ ಶಿಕ್ಷಣವನ್ನು ನಿಷೇಧಿಸಿ ರಾಜ್ಯ ಸರ್ಕಾರ ಹೊರಡಿಸಿದ್ದ ಆದೇಶಕ್ಕೆ ತಡೆ ನೀಡಿ ಹೈಕೋರ್ಟ್ ಮಧ್ಯಂತರ ಆದೇಶ ನೀಡಿದ್ದು, ಆನ್‌ಲೈನ್ ಶಿಕ್ಷಣಕ್ಕೆ ಷರತ್ತು ವಿಧಿಸಿದೆ. ಸರ್ಕಾರದ ಆದೇಶ ಪ್ರಶ್ನಿಸಿ ಬಹುತೇಕ ಐಸಿಎಸ್ಸಿ, ಸಿಬಿಎಸ್ಸಿ ಪಠ್ಯಕ್ರಮದ ಖಾಸಗಿ ಶಾಲೆಗಳ ವಿದ್ಯಾರ್ಥಿಗಳ ಪೋಷಕರು, ಶಾಲಾ ಶಿಕ್ಷಕರು ಮತ್ತು ಪ್ರಾಂಶುಪಾಲರು ಹಾಗೂ ಆಡಳಿತ ಮಂಡಳಿಗಳು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕಾ ಹಾಗೂ ನ್ಯಾ. ಆರ್.ನಟರಾಜ್ ಅವರಿದ್ದ ವಿಭಾಗೀಯ ನ್ಯಾಯಪೀಠ ಈ ಮಧ್ಯಂತರ ಆದೇಶ ಪ್ರಕಟಿಸಿತು.

'ಎಲ್‌ಕೆಜಿಯಿಂದ 5ನೇ ತರಗತಿವರೆಗೆ ಆನ್‌ಲೈನ್ ಶಿಕ್ಷಣ ನಿಷೇಧಿಸಿ 2020ರ ಜೂನ್ 15ರಂದು ಹೊರಡಿಸಿದ್ದ ಆದೇಶದಲ್ಲಿ ಆನ್‌ಲೈನ್ ಶಿಕ್ಷಣ ನಿಷೇಧಿಸಿದ್ದ ಭಾಗಕ್ಕೆ ಅನ್ವಯವಾಗುವಂತೆ ತಡೆ ನೀಡಲಾಗಿದ್ದು, ತಜ್ಞರ ಸಮಿತಿ ರಚನೆಗೆ ಸಂಬಂಧಿಸಿದ ಆದೇಶದ ಉಳಿದ ಭಾಗಕ್ಕೆ ಈ ತಡೆ ಅನ್ವಯವಾಗುವುದಿಲ್ಲ. ನೀತಿ ನಿರ್ಣಯದ ವಿಚಾರಗಳಲ್ಲಿ ಸಲಹೆಗಳನ್ನು ಪಡೆದುಕೊಳ್ಳಲು ಈ ರೀತಿಯ ಸಮಿತಿಗಳನ್ನು ರಚಿಸುವುದು ಸರ್ಕಾರದ ಅಧಿಕಾರ ಎಂದು ಹೇಳಿರುವ ಹೈಕೋರ್ಟ್, ಇದೇ ವೇಳೆ ಎಲ್‌ಕೆಜಿ, ಯುಕೆಜಿ ಮತ್ತು 1ರಿಂದ 10ನೇ ತರಗತಿವರೆಗೆ ಆನ್‌ಲೈನ್ ಶಿಕ್ಷಣ ಆರಂಭಿಸಲು ಕೆಲ ನಿಬಂಧನೆಗಳನ್ನು ವಿಧಿಸಿ ಜೂನ್ 27ರಂದು ಹೊರಡಿಸಿದ್ದ ಆದೇಶಕ್ಕೂ ತಡೆ ನೀಡಿದೆ.

ಶಾಲೆಗಳು ಆನ್‌ಲೈನ್ ಶಿಕ್ಷಣವನ್ನು ಮಕ್ಕಳಿಗೆ ಕಡ್ಡಾಯಗೊಳಿಸುವಂತಿಲ್ಲ. ಹೆಚ್ಚುವರಿ ಶುಲ್ಕ ಸಹ ವಿಧಿಸುವಂತಿಲ್ಲ ಮತ್ತು ಆನ್‌ಲೈನ್ ಶಿಕ್ಷಣದ ಸೌಲಭ್ಯ ಪಡೆದುಕೊಳ್ಳಲು ಸಾಧ್ಯವಾಗದ ಮಕ್ಕಳು ನಿರಂತರ ಕಲಿಕೆಯಿಂದ ವಂಚಿತರಾಗದಂತೆ ಶಾಲೆಗಳು ನೋಡಿಕೊಳ್ಳಬೇಕು. ಅಂತಹ ಮಕ್ಕಳಿಗೆ ಶಾಲೆಗಳು ಮರು ಆರಂಭಗೊಂಡ ಬಳಿಕ ವಿಶೇಷ ವ್ಯವಸ್ಥೆ ಮಾಡಬೇಕು ಎಂದು ಶಾಲೆಗಳಿಗೆ ಸೂಚಿಸಿದೆ. ಈ ಬಗ್ಗೆ 4 ವಾರಗಳಲ್ಲಿ ಆಕ್ಷೇಪಣೆ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ.

**ಅರ್ಜಿದಾರರ ವಾದವೇನು:–** 'ಕೋವಿಡ್–19 ಪರಿಸ್ಥಿತಿಯಲ್ಲೂ ಪ್ರಪಂಚದ ನಾನಾ ದೇಶಗಳಲ್ಲಿ ಆನ್‌ಲೈನ್ ಶಿಕ್ಷಣಕ್ಕೆ ಅವಕಾಶ ನೀಡಲಾಗಿದೆ. ನಮ್ಮ ದೇಶದ ಬೇರೆ ರಾಜ್ಯಗಳಲ್ಲೂ ಆನ್‌ಲೈನ್ ಶಿಕ್ಷಣಕ್ಕೆ ಯಾವುದೇ ನಿರ್ಬಂಧ–ನಿಷೇಧ ಹೇರಿಲ್ಲ. ಅಷ್ಟಕ್ಕೂ ಐಸಿಎಸ್ಸಿ, ಸಿಬಿಎಸ್ಸಿ ಶಾಲೆಗಳ ಪಠ್ಯಕ್ರಮ ಮತ್ತು ಕಲಿಕಾ ಮಾಧ್ಯಮದ ಮೇಲೆ ರಾಜ್ಯ ಸರ್ಕಾರಕ್ಕೆ ಯಾವುದೇ ನಿಯಂತ್ರಣವಿಲ್ಲ. ಕರ್ನಾಟಕ ಶಿಕ್ಷಣ ಕಾಯ್ದೆಯ ಮೂಲಕ ನಮ್ಮ ಮೇಲೆ ನಿಷೇಧ ಹೇರಲು ಅವಕಾಶವಿಲ್ಲ, ಕೋವಿಡ್–19 ಪರಿಸ್ಥಿತಿ ಎಲ್ಲಿಯವರೆಗೆ ಮುಂದುವರೆಯುತ್ತೆ ಎಂಬುದು ಗೊತ್ತಿಲ್ಲ. ಇಂತಹ ಅನಿಶ್ಚಿತತೆಯಲ್ಲಿ ಮಕ್ಕಳ ಶಿಕ್ಷಣ ಕುಂಠಿತಗೊಂಡರೆ ಅವರ ಭವಿಷ್ಯದ ಗತಿ ಏನು. ಆದ್ದರಿಂದ, ಆನ್‌ಲೈನ್ ಶಿಕ್ಷಣ ನಿಷೇಧಿಸಿ ರಾಜ್ಯ ಸರ್ಕಾರ ಹೊರಡಿಸಿರುವ ಆದೇಶ ಕಾನೂನುಬಾಹಿರ, ಮಕ್ಕಳ ಶಿಕ್ಷಣದ ಮತ್ತು ಮೂಲಭೂತ ಹಕ್ಕಿನ ಉಲ್ಲಂಘನೆಯಾಗಿದ್ದು ಅದನ್ನು ರದ್ದುಗೊಳಿಸಬೇಕು.

ಸರ್ಕಾರದ ಆದೇಶ ಪ್ರಶ್ನಿಸಿ ಕೋರ್ಟ್ ಮೆಟ್ಟಿಲೇರಿರುವುದು ಪ್ರತಿಷ್ಠಿತ ಶಾಲೆಗಳಲ್ಲಿ ಕಲಿಯುತ್ತಿರುವ ಮಕ್ಕಳ ಪೋಷಕರು ಎಂದು ಸರ್ಕಾರ ಹೇಳುತ್ತಿದೆ. ಪ್ರತಿಷ್ಠಿತ ಶಾಲೆಗಳ ಮಕ್ಕಳಿಗೆ ಸಿಗುವ ಅವಕಾಶಗಳು ಸರ್ಕಾರಿ ಶಾಲೆಗಳ ಮಕ್ಕಳಿಗೆ ಆಧುನಿಕ ತಂತ್ರಜ್ಞಾನದ ಮೂಲಸೌಕರ್ಯಗಳನ್ನು ಒದಗಿಸುವುದು ಸರ್ಕಾರದ ಜವಾಬ್ದಾರಿ. ಸರ್ಕಾರಿ ಶಾಲೆಗಳು ಮಕ್ಕಳ ವಿಚಾರದಲ್ಲಿ ಸರ್ಕಾರ ಮಾಡದ ಕೆಲಸಕ್ಕೆ ಬೇರೆ ಶಾಲೆಗಳ ಮಕ್ಕಳು ಅವಕಾಶ ವಂಚಿತರಾಗಬಾರದು ಎಂದು ನ್ಯಾ.ಎ.ಎಸ್. ಓಕಾ, ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ತಿಳಿಸಿದರು.

**ಸರ್ಕಾರದ ವಾದ:–** ಸಂವಿಧಾನದ ಕಲಂ 162ರಲ್ಲಿ ರಾಜ್ಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರ ಚಲಾಯಿಸಿ ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆಯಡಿ ಇರುವ ಅವಕಾಶಗಳನ್ನು ಬಳಸಿಕೊಂಡು ರಾಜ್ಯದ ಮಕ್ಕಳ ಆರೋಗ್ಯ ಮತ್ತು ಸುರಕ್ಷತೆಯ ದೃಷ್ಟಿಯಿಂದ ರಾಜ್ಯ ಸರ್ಕಾರ ತೀರ್ಮಾನ ತೆಗೆದುಕೊಂಡಿದೆ. ರಾಜ್ಯ ಸರ್ಕಾರ ಹೊರಡಿಸಿರುವ ಎರಡು ಆದೇಶಗಳು ಕಾರ್ಯಕಾರಿ ಆದೇಶಗಳಾಗಿವೆ. ಆನ್‌ಲೈನ್ ಶಿಕ್ಷಣಕ್ಕೆ ಸಂಬಂಧಿಸಿದಂತೆ ತಜ್ಞರ ಸಮಿತಿ ರಚಿಸಲಾಗಿದ್ದು, ಅದರ ವರದಿ ಆಧರಿಸಿ ಸಮಗ್ರ ಮಾರ್ಗಸೂಚಿಗಳನ್ನು ರೂಪಿಸುವವರೆಗೆ ಮಧ್ಯಂತರ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಸರ್ಕಾರದ ಆದೇಶ ಏಕಪಕ್ಷೀಯ, ಕಾನೂನುಬಾಹಿರ, ಶಿಕ್ಷಣದ ಹಕ್ಕು ಕಸಿಯುವ ಮತ್ತು

ದಬ್ಬಾಳಿಕೆಯಿಂದ ಕೂಡಿದೆ ಎಂಬ ಅರ್ಜಿದಾರರ ವಾದ ಒಪ್ಪಲು ಸಾಧ್ಯವಿಲ್ಲ. ಸರ್ಕಾರದ ಆದೇಶವನ್ನು ಶಿಕ್ಷಣದ ಹಕ್ಕು, ಮೂಲಭೂತ ಹಕ್ಕುಗಳ ವರದಿಯಲ್ಲಿ ನೋಡುವುದಕ್ಕಿಂತ ಮುಂದಾಲೋಚನೆಯಿಂದ ನೋಡಬೇಕಾಗಿದೆ.

ಆಧಾರ:ಉದಯವಾಣಿ, ದಿನಾಂಕ:08.07.2020